**ದಿನಾಂಕ: 18.12.2021 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ ಡಿ.ಸುಂದರಯ್ಯ- ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ - ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184ಉತ್ತರಹಳ್ಳಿ)
3. ಡಾ// ದೀಕ್ಷಿತ - ಕೋವಿಡ್-19 ಆರೋಗ್ಯ ವೈದ್ಯಾಧಿಕಾರಿಗಳು, ಬೆಂಗಳೂರು ದಕ್ಷಿಣ ವಿಭಾಗ
4. ಶ್ರೀ ಶಶಿಕುಮಾರ್ - ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 184
5. ಶ್ರೀ ಜಗದೀಶ್.ಹೆಚ್.ಆರ್ - ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ಇಲಾಖೆ,
6. ಶ್ರೀ ವೆಂಕಟೇಶ್.ಟಿ - ಪೋಲೀಸ್ ಇನ್ಸ್‌ಪೆಕ್ಟರ್, ಟ್ರಾಫಿಕ್ ವಿಭಾಗ, ಕುಮಾರಸ್ವಾಮಿ ಬಡಾವಣೆ,
7. ಶ್ರೀಮತಿ ಚೇತನಾ ನಾಯ್ಕ್ - ಸಬ್ ಇನ್ಸ್‌ಪೆಕ್ಟರ್, ಟ್ರಾಫಿಕ್ ವಿಭಾಗ, ಕುಮಾರಸ್ವಾಮಿ ಬಡಾವಣೆ,
8. ಶ್ರೀ ಕೃಷ್ಣಯ್ಯ - ಎ.ಎಸ್.ಐ, ಕಾನೂನು ಮತ್ತು ಸುವ್ಯವಸ್ಥೆ, ಸುಬ್ರಮಣ್ಯಪುರ ಪೋಲೀಸ್ ಠಾಣೆ,
9. ಶ್ರೀ ಹೆಚ್.ನರಸಪ್ಪ - ತೋಟಗಾರಿಕಾ ಸಹಾಯಕರು, ಬೊಮ್ಮನಹಳ್ಳಿ ವಲಯ,
10. ಶ್ರೀ ವೆಂಕಟೇಶ್.ಕೆ - ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
11. ಶ್ರೀ ಶಿವರಾಜು - ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
12. ಶ್ರೀ ಸಿದ್ದರಾಜು - ಮೇಲ್ವಿಚಾರಕರು, ಬೀದಿ ದೀಪಗಳು, ಬಿ.ಬಿ.ಎಂ.ಪಿ

***ಹಾಜರಿದ್ದ ಸಮಿತಿ ಸದಸ್ಯರು:-***

1. ಶ್ರೀ ಎಸ್.ಕೆ.ಸುದೀಂದ್ರ - ಪೂರ್ಣಪ್ರಜ್ಞಾ ಬಡಾವಣೆ RWA
2. ಶ್ರೀ ಕೆ.ಶ್ರೀನಾಥ್ - ಪೂರ್ಣಪ್ರಜ್ಞಾ ಬಡಾವಣೆ RWA
3. ಶ್ರೀ ಬಾಬು - ಹೆಚ್.ಎಂ.ಎಸ್ ಬಡಾವಣೆ RWA
4. ಶ್ರೀ ಅರುಣ್ - ಎ.ಜಿ.ಎಸ್ ಬಡಾವಣೆ RWA
5. ಶ್ರೀ ಅಮರ್.ಎಂ.ಆರ್ - ಎ.ಜಿ.ಎಸ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸೂಚಿಸಲಾಗಿರುತ್ತದೆ.

1. **ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ**

➢ ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ಟೈಮರ್ ಹಾಳಾಗಿದ್ದು, ಬೆಳಗಿನ ಜಾವದಲ್ಲೂ ವಿದ್ಯುತ್ ದೀಪಗಳು ಹುರಿಯುತ್ತಿದ್ದು, ಕೂಡಲೇ ಸರಿಪಡಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಬೀದಿ ದೀಪ ರವರಿಗೆ ಸೂಚಿಸಿರುತ್ತಾರೆ.

28/12/2021

Asst. Sub-Inspector Of Police
Subramanyapura Police Station
Bangalore-560 061.

2. **ಬೆಸ್ಕಾಂ ಇಲಾಖೆಗೆ ಸಂಬಂಧಪಟ್ಟಂತೆ.**

- ಪೂರ್ಣಪ್ರಜ್ಞಾ ಬಡಾವಣೆಯಿಂದ ಎ.ಜಿ.ಎಸ್ ಬಡಾವಣೆಗೆ ಹೋಗುವ ಮಾರ್ಗದಲ್ಲಿ ಬರುವ ಹಾಳಾಗಿರುವ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲು ಕೋರಿರುತ್ತಾರೆ.
- ಪೂರ್ಣಪ್ರಜ್ಞಾ ಬಡಾವಣೆಯಲ್ಲಿ ಈಗಾಗಲೇ 11ಕೆ.ವಿ ಕೇಬಲ್‌ಗಳನ್ನು ಅಳವಡಿಸಲಾಗಿದ್ದು, ಕೂಡಲೇ ಮನೆ ಮನೆಗಳಿಗೆ ಸೆಕೆಂಡರಿ ಕೇಬಲ್‌ಗಳನ್ನು ಅಳವಡಿಸಲು ಕೋರಿರುತ್ತಾರೆ.
- ಪೂರ್ಣಪ್ರಜ್ಞಾ ಬಡಾವಣೆ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫರ್ಮರ್‌ಗಳಿಗೆ ಹೊಂದಿಕೊಂಡಂತಿರುವ ಮರದ ಕೊಂಬೆಗಳನ್ನು ಕಡಿದು ಹಾಕಲು ಸಾರ್ವಜನಿಕರು ಕೋರಿರುತ್ತಾರೆ.
- ವಾರ್ಡ್ ವ್ಯಾಪ್ತಿಯ ಪಾದಚಾರಿ ಮಾರ್ಗದಲ್ಲಿರುವ Spun Pole & GOS System ಅನ್ನು ತೆರವುಗೊಳಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಇಲಾಖೆ ರವರಿಗೆ ಸೂಚಿಸಿರುತ್ತಾರೆ.

3. **ಟ್ರಾಫಿಕ್ ಪೋಲೀಸ್ ಠಾಣೆಗೆ ಸಂಬಂಧಪಟ್ಟಂತೆ**

- ಪೂರ್ಣಪ್ರಜ್ಞಾ ಬಡಾವಣೆಯಿಂದ ಬೆಸ್ಟ್ ಕ್ಲಬ್‌ಗೆ ಹೋಗುವ ದಾರಿಯ 3ನೇ ಮತ್ತು 4ನೇ ಮುಖ್ಯರಸ್ತೆ ಹೆಚ್ಚಾಗಿ ವಾಹನ ಸಂಚಾರವಿದ್ದು, ಅಲ್ಲಿ ಟ್ರಾಫಿಕ್ ನಿರ್ವಹಣೆ ಮಾಡಲು ಟ್ರಾಫಿಕ್ ಪೋಲೀಸ್‌ರನ್ನು ನಿಯೋಜಿಸಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆಯ ಪಾರ್ಕ್‌ನ ಸುತ್ತಮುತ್ತಲಿನಲ್ಲಿ ಅನಧಿಕೃತವಾಗಿ ಕಾರ್‌ಗಳನ್ನು ನಿಲುಗಡೆ ಮಾಡಿರುತ್ತಾರೆ. ಅನಧಿಕೃತವಾಗಿ ನಿಲುಗಡೆ ಮಾಡಿರುವ ವಾಹನಗಳನ್ನು ತಮ್ಮ ಸುಪರ್ದಿಗೆ ಪಡೆದು ಸಾರ್ವಜನಿಕರಿಗೆ ಅನುವು ಮಾಡಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆಯ ರಸ್ತೆಯಲ್ಲಿ Heavy Goods Carrier ವಾಹನಗಳು ಸಂಚಾರ ಮಾಡುತ್ತಿದ್ದು ಇದರಿಂದ ಅಲ್ಲಿನ ಅಕ್ಕಪಕ್ಕದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.
- ವಾರ್ಡ್ ವ್ಯಾಪ್ತಿಯ ಮುಖ್ಯರಸ್ತೆಯಲ್ಲಿ ನೋ ಪಾರ್ಕಿಂಗ್ ಜಾಗದಲ್ಲಿ ನಿಲುಗಡೆ ಮಾಡಿರುವ ವಾಹನವನ್ನು ಟ್ರಾಫಿಕ್ ಇಲಾಖೆಯಿಂದ ಟೋಯಿಂಗ್ ಮಾಡಿ ಪೋಲೀಸ್ ಠಾಣೆ ಹತ್ತಿರ ನಿಲುಗಡೆ ಮಾಡಲು ಜಾಗದ ಅಭಾವತೆ ಇರುವುದರಿಂದ ಬಿ.ಬಿ.ಎಂ.ಪಿ ವತಿಯಿಂದ ಜಾಗವನ್ನು ನೀಡಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಇನ್ಸ್‌ಪೆಕ್ಟರ್ ಕುಮಾರಸ್ವಾಮಿ ಬಡಾವಣೆ ಸಂಚಾರಿ ಪೋಲೀಸ್ ಠಾಣೆ ರವರಿಗೆ ಸೂಚಿಸಿರುತ್ತಾರೆ.

4. **ಕಾನೂನು ಮತ್ತು ಸುವ್ಯವಸ್ಥೆ ಪೋಲೀಸ್ ಠಾಣೆಗೆ ಸಂಬಂಧಪಟ್ಟಂತೆ**

- ಪೂರ್ಣಪ್ರಜ್ಞಾ ಬಡಾವಣೆ ಪಾರ್ಕ್–5 ರ 6ನೇ ಮುಖ್ಯರಸ್ತೆ ಮತ್ತು 2ನೇ ಮುಖ್ಯರಸ್ತೆಯಲ್ಲಿರುವ ಖಾಲಿ ಜಾಗದಲ್ಲಿ ಅನಧಿಕೃತ ಚಟುವಟಿಕೆ ನಡೆಯುತ್ತಿದ್ದು, ಕೂಡಲೇ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆ ಬಸ್ ನಿಲ್ದಾಣ ಮತ್ತು ಚರ್ಚ್ ಮುಂಭಾಗ ಇರುವ ಖಾಲಿ ಜಾಗದಲ್ಲಿ ಅನಧಿಕೃತ ಚಟುವಟಿಕೆ ನಡೆಯುತ್ತಿದ್ದು, ಕೂಡಲೇ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಇನ್ಸ್‌ಪೆಕ್ಟರ್ ಸುಬ್ರಮಣ್ಯಪುರ ಪೋಲೀಸ್ ಠಾಣೆ ರವರಿಗೆ ಸೂಚಿಸಿರುತ್ತಾರೆ.

5. **ತೋಟಗಾರಿಕೆ / ಯೋಜನಾ ಇಲಾಖೆಗೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯ ಪಾರ್ಕ್‌ಗಳಲ್ಲಿ ಗಿಡಮರಗಳ ಸಂರಕ್ಷಣೆಗೆ ಅವಶ್ಯಕ ನೀರು ಸರಬರಾಜು ಆಗದೇ ಇರುವುದರಿಂದ ಕೂಡಲೇ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

➢ ಎ.ಜಿ.ಎಸ್ ಬಡಾವಣೆಯ ಪಾರ್ಕ್‌ಗಳಲ್ಲಿ ದೈನಂದಿನ ನಿರ್ವಹಣೆಯಾಗುತ್ತಿಲ್ಲವೆಂದು ತಿಳಿಸಿದ್ದು, ಕೂಡಲೇ ನಿರ್ವಹಣೆ ಕಾರ್ಯ ಕೈಗೆತ್ತಿಕೊಳ್ಳಲು ಕೋರಿರುತ್ತಾರೆ.

➢ ವಾರ್ಡ್ ವ್ಯಾಪ್ತಿಯಲ್ಲಿ ಡಯಾಲಿಸಿಸ್ ಸೆಂಟರ್‌ನ ಅವಶ್ಯಕತೆ ಇದ್ದು, ಅತೀ ತುರ್ತಾಗಿ ಸಾರ್ವಜನಿಕರಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ನಿರ್ಮಾಣ ಮಾಡಲು ಕೋರಿರುತ್ತಾರೆ. ಸದರಿ ಕಾಮಗಾರಿಯನ್ನು ಈಗಾಗಲೇ ಯೋಜನಾ ವಿಭಾಗದಿಂದ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ವಲಯ ತೋಟಗಾರಿಗೆ ಅಧೀಕ್ಷಕರು ಮತ್ತು ಕಾರ್ಯಪಾಲಕ ಅಭಿಯಂತರರು ಯೋಜನೆ ವಿಭಾಗ ಬೊಮ್ಮನಹಳ್ಳಿ ವಲಯ ರವರಿಗೆ ಸೂಚಿಸಿರುತ್ತಾರೆ.

6. **ಘನತ್ಯಾಜ್ಯ ವಿಲೇವಾರಿ ಮತ್ತು ನಿರ್ವಹಣೆಗೆ ಸಂಬಂಧಪಟ್ಟಂತೆ**

➢ ನಾಯ್ಡು ಬಡಾವಣೆಯ ಮುಖ್ಯರಸ್ತೆಯಲ್ಲಿ ಅನಧಿಕೃತವಾಗಿ ಸಣ್ಣ ಕೈಗಾರಿಕೆ ಚಟುವಟಿಕೆಯನ್ನು ನಿರ್ವಹಿಸುತ್ತಿದ್ದು, ಕೂಡಲೇ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

➢ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಸೊಳ್ಳೆ ಔಷಧಿ ಸಿಂಪಡಣೆ ಕಾರ್ಯ ಸ್ಥಗಿತಗೊಂಡಿರುವುದು ಕಂಡುಬಂದಿದ್ದು, ಕಾರ್ಯ ನಿರ್ವಹಿಸಿದ್ದಲ್ಲಿ ಮಾಹಿತಿ ನೀಡಲು ಕೋರಿರುತ್ತಾರೆ.

➢ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಪುಟ್‌ಪಾತ್ ಮೇಲೆ ನಿರ್ಮಾಣ ಮಾಡಿರುವ ವಾಣಿಜ್ಯ ಚಟುವಟಿಕೆ ಅಂಗಡಿ ಮುಗಟ್ಟುಗಳನ್ನು ತೆರವುಗೊಳಿಸಲು ಬಿ.ಬಿ.ಎಂ.ಪಿ ಇಲಾಖೆ, ಟ್ರಾಫಿಕ್ ಪೋಲೀಸ್ ಇಲಾಖೆ, ಮತ್ತು ಸಾರ್ವಜನಿಕರೊಂದಿಗೆ ಚರ್ಚಿಸಿ ಸಮನ್ವಯ ಸಾಧಿಸಲು ಸಭೆ ಕರೆಯಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ಹಾಗೂ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ವಿಲೇವಾರಿ ಮತ್ತು ನಿರ್ವಹಣೆ ರವರಿಗೆ ಸೂಚಿಸಿರುತ್ತಾರೆ.

7. **ಸ.ಕಾ.ನಿ.ಅ ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

➢ ಎ.ಜಿ.ಎಸ್ ಬಡಾವಣೆಯ ರಸ್ತೆಗಳಲ್ಲಿ ಡಾಂಬರೀಕರಣ ಮಾಡಬೇಕಾಗಿರುವ ಉಳಿದ ರಸ್ತೆಗಳಿಗೆ ಕೂಡಲೇ ಡಾಂಬರೀಕರಣ ಮಾಡಲು ಮತ್ತು ಸುಗಮ ವಾಹನ ಸಂಚಾರಕ್ಕೆ ಗುಂಡಿಗಳನ್ನು ಮುಚ್ಚಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಹಳ್ಳಿ ರವರಿಗೆ ಸೂಚಿಸಿರುತ್ತಾರೆ.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಅಂಜನಾಪುರ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184

ಪೋಲೀಸ್ ಇನ್‌ಸ್ಪೆಕ್ಟರ್‌ರವರ ಕಛೇರಿ
ದಿನಾಂಕ. 28/12
ಸಂಖ್ಯೆ.........
ಬೆಂಗಳೂರು ನಗರ
ಲೇಔಟ್ ಸಂಚಾರ ಠಾಣೆ